**All India Radio: Bangalore**
**National Bulletin In Kannada**
**11.06.2026  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**11.06.2026  07.35 a.m.**

**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನೀತಿ ಆಯೋಗದ ೧೧ನೇ ಆಡಳಿತ ಮಂಡಳಿ ಸಭೆ
2. ಪ್ರಧಾನ ಮಂತ್ರಿ ಸೂರ್ಯ ಘರ್ ಯೋಜನೆ ನಾಗರಿಕರನ್ನು ಶುದ್ಧ ಇಂಧನ ಉತ್ಪಾದಕರನ್ನಾಗಿ ಪರಿವರ್ತಿಸಿದೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
3. ಬಲ್ಗೇರಿಯಾ ಪ್ರಧಾನಿಯೊಂದಿಗೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಮಾತುಕತೆ
4. ಆಸ್ಟ್ರೇಲಿಯನ್ ಓಪನ್ ಬ್ಯಾಡ್ಮಿಂಟನ್: ಮಹಿಳಾ ಸಿಂಗಲ್ಸ್ ವಿಭಾಗದ ಪ್ರೀ-ಕ್ವಾರ್ಟರ್ ಫೈನಲ್ ಪಂದ್ಯದಲ್ಲಿಂದು ಪಿ.ವಿ.ಸಿಂಧು-ಇಶಾರಾಣಿ ಮುಖಾಮುಖಿ

<><><><>

ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಇಂದು ನವದೆಹಲಿಯ ರಾಷ್ಟ್ರಪತಿ ಭವನ ಸಾಂಸ್ಕೃತಿಕ ಕೇಂದ್ರದಲ್ಲಿ ನೀತಿ ಆಯೋಗದ ೧೧ನೇ ಆಡಳಿತ ಮಂಡಳಿ ಸಭೆ ನಡೆಯಲಿದೆ.  ಈ ವರ್ಷ '೨೦೪೭ರವೇಳೆಗೆ ವಿಕಸಿತ ಭಾರತಕ್ಕಾಗಿ ಅಂತರ್ಗತ ಮಾನವ ಅಭಿವೃದ್ಧಿ' ವಿಷಯದ ಅಡಿಯಲ್ಲಿ ಸಭೆ ಆಯೋಜಿಸಲಾಗಿದೆ. ಎಲ್ಲಾ ವರ್ಗ ಹಾಗೂ ಪ್ರದೇಶಗಳ ನಾಗರಿಕರ ಯೋಗಕ್ಷೇಮ ಮತ್ತು ಅಭಿವೃದ್ಧಿಯನ್ನು ಸಾಕಾರಗೊಳಿಸಿ, ಅವುಗಳನ್ನು ಅಳೆಯಬಹುದಾದ ಫಲಿತಾಂಶಗಳಾಗಿ ಪರಿವರ್ತಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು. ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಲೆಫ್ಟಿನೆಂಟ್ ಗವರ್ನರ್‌ಗಳು ಪಾಲ್ಗೊಳ್ಳಲಿರುವ ಈ ಸಭೆಯಲ್ಲಿ ನಾಲ್ಕು ಪ್ರಮುಖ ಸ್ತಂಭಗಳಾದ ಮಾನವ ಬಂಡವಾಳ ಮತ್ತು ಕೌಶಲ್ಯಾಭಿವೃದ್ಧಿ; ಉದ್ಯೋಗ, ಉದ್ಯಮಶೀಲತೆ ಮತ್ತು ವಿಕೇಂದ್ರೀಕೃತ ಬೆಳವಣಿಗೆ; ಆರೋಗ್ಯ, ಪೋಷಣೆ ಮತ್ತು ಯೋಗಕ್ಷೇಮ; ಹಾಗೂ ಎಲ್ಲರಿಗೂ ಸಮಾನತೆ ಮತ್ತು ಗೌರವದ ಚೌಕಟ್ಟಿನ ಕುರಿತು ಪ್ರಮುಖವಾಗಿ ಚರ್ಚಿಸಲಾಗುವುದು. ದೇಶಾದ್ಯಂತ ಉದ್ಯಮಶೀಲತೆ ಮತ್ತು ಸುಸ್ಥಿರ ಉದ್ಯೋಗಾವಕಾಶಗಳ ಸೃಷ್ಟಿಗೆ ಒತ್ತು ನೀಡಲಾಗುವುದು.

<><><><>

ಪ್ರಧಾನ ಮಂತ್ರಿ ಸೂರ್ಯ ಘರ್ ಯೋಜನೆಯು ಸುಮಾರು ೪೨ ಲಕ್ಷ ಮನೆಗಳಿಗೆ ಪ್ರಯೋಜನವನ್ನು ನೀಡಿದೆ. ಅಲ್ಲದೇ ನಾಗರಿಕರನ್ನು ಗ್ರಾಹಕರಿಂದ ಶುದ್ಧ ಇಂಧನ ಉತ್ಪಾದಕರನ್ನಾಗಿ ಪರಿವರ್ತಿಸಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಕಾರ್ಯಕ್ರಮವೊಂದನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ವಿದ್ಯುತ್ ಬಿಲ್‌ಗಳನ್ನು ಸರಾಸರಿ ಶೇಕಡಾ ೭೧ ರಷ್ಟು ಕಡಿಮೆ ಮಾಡಲಾಗಿದೆ. ಅನೇಕ ಫಲಾನುಭವಿಗಳು ಶೂನ್ಯ ವಿದ್ಯುತ್ ಬಿಲ್‌ಗಳನ್ನು ದಾಖಲಿಸಿದ್ದಾರೆ ಎಂದರು.

ಪ್ರಧಾನ ಮಂತ್ರಿ ಸೂರ್ಯ ಘರ್ ಮತ್ತು ಪಿಎಂ-ಕುಸುಮ್‌ನಂತಹ ಉಪಕ್ರಮಗಳು ನವೀಕರಿಸಬಹುದಾದ ಇಂಧನ ಪ್ರವೇಶವನ್ನು ವಿಸ್ತರಿಸಲು ಮತ್ತು ಸುಸ್ಥಿರ ಅಭಿವೃದ್ಧಿಯ ಮೂಲಕ ನಾಗರಿಕರನ್ನು ಸಬಲೀಕರಣಗೊಳಿಸುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತವೆ ಎಂದು ಅವರು ಹೇಳಿದರು.ಪವನ, ಜಲ, ಸೌರ ಯೋಜನೆಗಳು ಸೇರಿದಂತೆ ನವೀಕರಿಸಬಹುದಾದ ಇಂಧನ ಉಪಕ್ರಮಗಳು ಸುಸ್ಥಿರ ಬೆಳವಣಿಗೆಗೆ ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿವೆ ಎಂದು ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದರು. ಇದೇ ವೇಳೆ ಸಣ್ಣ ಜಲವಿದ್ಯುತ್ ಅಭಿವೃದ್ಧಿ ಯೋಜನೆಗಳಿಗಾಗಿ ಆನ್‌ಲೈನ್ ಪೋರ್ಟಲ್‌ಗೆ ಸಚಿವರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ರಾಷ್ಟ್ರೀಯ ಸೌರಶಕ್ತಿ ಸಂಸ್ಥೆ ಮತ್ತು ಮಿಲಿಟರಿ ಎಂಜಿನಿಯರ್ ಸೇವೆಗಳ ನಡುವೆ ಒಪ್ಪಂದಕ್ಕೆ ಸಹಿ ಹಾಕಲಾಯಿತು.

<><><><>

ದೇಶದ ೧೪೦ ಕೋಟಿ ನಾಗರಿಕರ ಆಕಾಂಕ್ಷೆಗಳು ಎಲ್ಲಾ ರೀತಿಯಲ್ಲೂ ಈಡೇರುಸುವುದಾಗಿ ಎಂದು ಪ್ರಧಾನಿ ನರೇಂದ್ರ ಮೋದಿ ಭರವಸೆ ನೀಡಿದ್ದಾರೆ. ನವದೆಹಲಿಯ ಭಾರತ ಮಂಟಪಂನಲ್ಲಿ ನಿನ್ನೆ ನಡೆದ ಎನ್‌ಡಿಎ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ಎನ್‌ಡಿಎ ಯಾವಾಗಲೂ ದೇಶದ ವಿಶ್ವಾಸವನ್ನು ಬಲಪಡಿಸಿದೆ ಎಂದು ಹೇಳಿದರು. ಕಾಂಗ್ರೆಸ್ ದ್ರೋಹ ಮಾಡಿದ ನಂತರ ದೇಶದ ಜನರು ವಿಶ್ವಾಸದಿಂದ ಎನ್‌ಡಿಎ ಸರ್ಕಾರಕ್ಕೆ ಬಲ ನೀಡಿದ್ದಾರೆ. ೨೦೧೪ ರಲ್ಲಿ ಉದಯಿಸುತ್ತಿದ್ದ ಭರವಸೆಯ ಸೂರ್ಯ ಇಂದು ನವೀಕೃತ ವಿಶ್ವಾಸದ ಕಿರಣವಾಗಿ ರೂಪಾಂತರಗೊಂಡಿದೆ ಎಂದು ಅವರು ಪ್ರತಿಪಾದಿಸಿದರು. ಸರಿಯಾದ ಉದ್ದೇಶದಿಂದ ಸರ್ಕಾರ ನಡೆಸಿದಾಗ, ಅಭಿವೃದ್ಧಿಯೂ ತ್ವರಿತಗತಿಯಲ್ಲಿ ನಡೆಯುತ್ತದೆ ಎಂಬುದನ್ನು ದೇಶದ ಜನರು ಮೊದಲ ಬಾರಿಗೆ ನೋಡಿದ್ದಾರೆ ಎಂದು ಅವರು ಹೇಳಿದರು. ಪ್ರಪಂಚದಾದ್ಯಂತದ ಪ್ರಮುಖ

ದೇಶಗಳ ಆರ್ಥಿಕತೆಗಳು ಸಂಕಷ್ಟದಲ್ಲಿರುವ ಸಮಯದಲ್ಲಿ, ಭಾರತ, ೨೦೨೫-೨೬ರಲ್ಲಿ ಶೇಕಡಾ ೭.೭ ರಷ್ಟು ಬೆಳವಣಿಗೆ ದರವನ್ನು ಸಾಧಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

<><><><>

ಭಾರತದ ಇತಿಹಾಸದಲ್ಲೇ ಅತ್ಯಂತ ಸುದೀರ್ಘ ಅವಧಿಗೆ ಸತತವಾಗಿ ಚುನಾಯಿತರಾದ ಪ್ರಧಾನಮಂತ್ರಿ ಎಂಬ ಐತಿಹಾಸಿಕ ಸಾಧನೆ ಮಾಡಿರುವ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವವನ್ನು ಶ್ಲಾಘಿಸಿ ಎನ್‌ಡಿಎ ಮೈತ್ರಿಕೂಟ ವಿಶೇಷ ನಿರ್ಣಯವನ್ನು ಅಂಗೀಕರಿಸಿದೆ. ನವದೆಹಲಿಯ ಭಾರತ್ ಮಂಟಪಂನಲ್ಲಿ ನಿನ್ನೆ ಆಯೋಜಿಸಿದ್ದ ಎನ್‌ಡಿಎ ಮೈತ್ರಿಕೂಟದ ಬೃಹತ್ ಸಮಾವೇಶದಲ್ಲಿ ಈ ನಿರ್ಣಯವನ್ನು ಮಂಡಿಸಲಾಗಿದೆ. ಕೇಂದ್ರದಲ್ಲಿ ಎನ್‌ಡಿಎ ಸರ್ಕಾರ ಯಶಸ್ವಿಯಾಗಿ ೧೨ ವರ್ಷಗಳನ್ನು ಪೂರೈಸಿರುವ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಸುದೀರ್ಘ ಕಾಲ ನಿರಂತರವಾಗಿ ಸೇವೆ ಸಲ್ಲಿಸಿದ ಚುನಾಯಿತ ಪ್ರಧಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿರುವುದನ್ನು ಆಚರಿಸಲು ಈ ವಿಶೇಷ ಸಭೆಯನ್ನು ಆಯೋಜಿಸಲಾಗಿತ್ತು. ಸಭೆಯಲ್ಲಿ ನಿರ್ಣಯವನ್ನು ಮಂಡಿಸಿ ಮಾತನಾಡಿದ ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು, ಭಾರತದ ಇತಿಹಾಸದಲ್ಲೇ ಸುದೀರ್ಘ ಅವಧಿಗೆ ನಿರಂತರವಾಗಿ ಚುನಾಯಿತರಾದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಸಲ್ಲಿಸುತ್ತಿರುವ ಐತಿಹಾಸಿಕ ಗೌರವ ಇದಾಗಿದೆ. ಈ ಮಹಾನ್ ರಾಷ್ಟ್ರವನ್ನು ಮುನ್ನಡೆಸಲು ಮತ್ತು ದೇಶದ ಸೇವೆ ಮಾಡಲು ಅವರು ಸರಿಯಾದ ಸಮಯದಲ್ಲಿ, ಸರಿಯಾದ ಸ್ಥಳದಲ್ಲಿ ಇರುವ ಅತ್ಯಂತ ಸೂಕ್ತ ನಾಯಕರಾಗಿದ್ದಾರೆ ಎಂದು ಪ್ರಶಂಸಿಸಿದರು.

<><><><>

ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ನಿನ್ನೆ ಸೋಫಿಯಾದಲ್ಲಿ ಬಲ್ಗೇರಿಯಾ ಪ್ರಧಾನಿ ರುಮೆನ್ ರಾದೇವ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಭಾರತದ ದೃಢವಾದ ದ್ವಿಪಕ್ಷೀಯ ಸಂಬಂಧಗಳು, ಬಲಷ್ಠವಾಗುತ್ತಿರುವ ಭಾರತ-ಬಲ್ಗೇರಿಯಾ ಕಾರ್ಯತಂತ್ರದ ಪಾಲುದಾರಿಕೆಯಿಂದ ಸೃಷ್ಟಿಯಾದ ಇತ್ತೀಚಿನ ಅವಕಾಶಗಳು ಮತ್ತು ಅಸ್ಥಿರ ಜಗತ್ತಿನಲ್ಲಿ ಹೆಚ್ಚುತ್ತಿರುವ ಅಪಾಯವನ್ನು ತಗ್ಗಿಸಲು, ನಿಕಟ ದ್ವಿಪಕ್ಷೀಯ ಸಹಕಾರದ ಅಗತ್ಯವನ್ನು ಡಾ. ಎಸ್.ಜೈಶಂಕರ್ ಒತ್ತಿ ಹೇಳಿದರು. ವ್ಯಾಪಾರ ಮತ್ತು ಹೂಡಿಕೆ, ಔಷಧ, ಅರೆವಾಹಕಗಳು, ಕೃತಕ ಬುದ್ದಿಮತ್ತೆ, ಬಾಹ್ಯಾಕಾಶ, ರಕ್ಷಣೆ, ಪ್ರವಾಸೋದ್ಯಮ ಮತ್ತು ಸೃಜನಶೀಲ ಮನರಂಜನಾ ಉದ್ಯಮದಲ್ಲಿ ಎರಡೂ ದೇಶಗಳ ನಡುವಿನ ಸಹಯೋಗದ ಕುರಿತು ಉಭಯ ನಾಯಕರು

ಚರ್ಚಿಸಿದರು. ಅಲ್ಲದೇ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅವರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಇದಕ್ಕೂ ಮುನ್ನ ಡಾ. ಜೈಶಂಕರ್ ಅವರು ಸೋಫಿಯಾದಲ್ಲಿರುವ ರಾಷ್ಟ್ರೀಯ ವಸ್ತುಸಂಗ್ರಹಾಲಯಕ್ಕೆ ಭೇಟಿ ನೀಡಿದರು.

<><><>

ಕೇಂದ್ರ ಸಂಸ್ಕೃತಿ ಸಚಿವಾಲಯವು ೨೦೨೪ ಮತ್ತು ೨೦೨೫ನೇ ಸಾಲಿನ ಸಂಗೀತ ನಾಟಕ ಅಕಾಡೆಮಿ ಫೆಲೋಶಿಪ್, ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ ಹಾಗೂ ಉಸ್ತಾದ್ ಬಿಸ್ಮಿಲ್ಲಾ ಖಾನ್ ಯುವ ಪುರಸ್ಕಾರಗಳನ್ನು ಘೋಷಿಸಿದೆ. ಸಂಗೀತ, ನೃತ್ಯ, ರಂಗಭೂಮಿ, ಸಾಂಪ್ರದಾಯಿಕ, ಜಾನಪದ, ಬುಡಕಟ್ಟು ಕಲೆ ಹಾಗೂ ಗೊಂಬೆಯಾಟ ಸೇರಿದಂತೆ ವಿವಿಧ ಪ್ರದರ್ಶನ ಕಲಾ ಕ್ಷೇತ್ರಗಳಿಗೆ ಸಂಬಂಧಿಸಿದ ಒಟ್ಟು ೧೦೮ ಕಲಾವಿದರನ್ನು ೨೦೨೪ ಮತ್ತು ೨೦೨೫ನೇ ಸಾಲಿನ ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿಗೆ ಅಕಾಡೆಮಿ ಆಯ್ಕೆ ಮಾಡಿದೆ. ಜೊತೆಗೆ, ೨೦೨೪ ಮತ್ತು ೨೦೨೫ನೇ ಸಾಲಿನ ಉಸ್ತಾದ್ ಬಿಸ್ಮಿಲ್ಲಾ ಖಾನ್ ಯುವ ಪುರಸ್ಕಾರಕ್ಕಾಗಿ ೧೦೬ ಯುವ ಕಲಾವಿದರನ್ನು ಆಯ್ಕೆ ಮಾಡಲಾಗಿದೆ. ಉಸ್ತಾದ್ ಬಿಸ್ಮಿಲ್ಲಾ ಖಾನ್ ಯುವ ಪುರಸ್ಕಾರವು ಪ್ರಶಸ್ತಿ ಪುರಸ್ಕಾರದೊಂದಿಗೆ ೨೫ ಸಾವಿರ ರೂಪಾಯಿ ನಗದು ಬಹುಮಾನವನ್ನು ಒಳಗೊಂಡಿದೆ. ಅಕಾಡೆಮಿ ಫೆಲೋಶಿಪ್ ಮೂರು ಲಕ್ಷ ರೂಪಾಯಿ ನಗದು ಬಹುಮಾನವನ್ನು ಹೊಂದಿದ್ದರೆ, ಅಕಾಡೆಮಿ ಪ್ರಶಸ್ತಿಯು ಪುರಸ್ಕಾರದೊಂದಿಗೆ ಒಂದು ಲಕ್ಷ ರೂಪಾಯಿ ನಗದು ಬಹುಮಾನವನ್ನು ಒಳಗೊಂಡಿದೆ. ಸಂಗೀತ ನಾಟಕ ಅಕಾಡೆಮಿ ಫೆಲೋಶಿಪ್ ಮತ್ತು ಪ್ರಶಸ್ತಿಗಳನ್ನು ವಿಶೇಷ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿಗಳು ವಿತರಿಸಲಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

<><><>

ಪ್ರಯಾಣಿಕರ ಸುರಕ್ಷತೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಭಾರತೀಯ ರೈಲ್ವೆಯು ದೇಶದಾದ್ಯಂತ ರೈಲು ನಿಲ್ದಾಣಗಳಲ್ಲಿ ಅಗ್ನಿ ಸುರಕ್ಷತಾ ಲೆಕ್ಕಪರಿಶೋಧನೆ ಆರಂಭಿಸಿದೆ. ಅಸ್ತಿತ್ವದಲ್ಲಿರುವ ಅಗ್ನಿ ಸುರಕ್ಷತಾ ವ್ಯವಸ್ಥೆಗಳ ಕಾರ್ಯಕ್ಷಮತೆಯನ್ನು ಪರಿಶೀಲಿಸುವುದು ಹಾಗೂ ಸುಧಾರಣೆ ಅಗತ್ಯವಿರುವ ಕ್ಷೇತ್ರಗಳನ್ನು ಗುರುತಿಸುವುದು ಈ ಉಪಕ್ರಮದ ಪ್ರಮುಖ ಉದ್ದೇಶವಾಗಿದೆ. ಇದರಿಂದ ಪ್ರಯಾಣಿಕರ ಸುರಕ್ಷತೆ ಹೆಚ್ಚುವುದರ ಜೊತೆಗೆ ರೈಲ್ವೆ ಆಸ್ತಿಗಳ ರಕ್ಷಣೆಯೂ ಖಾತ್ರಿಯಾಗಲಿದೆ. ಈ ಕುರಿತು ಮಾಹಿತಿ ನೀಡಿರುವ ರೈಲ್ವೆ ಸಚಿವಾಲಯ, ರೈಲು ನಿಲ್ದಾಣಗಳಲ್ಲಿನ ಕಟ್ಟಡಗಳು, ವಿದ್ಯುತ್ ವ್ಯವಸ್ಥೆಗಳು, ಹವಾನಿಯಂತ್ರಣ ವ್ಯವಸ್ಥೆಗಳು, ತುರ್ತು ನಿರ್ಗಮನ ಮಾರ್ಗಗಳು ಹಾಗೂ ಅಗ್ನಿಶಾಮಕ ಸಾಧನಗಳು ಸೇರಿದಂತೆ ಎಲ್ಲ ಪ್ರಮುಖ

ಸುರಕ್ಷತಾ ಮೂಲಸೌಕರ್ಯಗಳ ಪರಿಶೀಲನೆ ನಡೆಸಲಾಗುವುದು ಎಂದು ಸಚಿವಾಲಯ ತಿಳಿಸಿದೆ. ಅಗ್ನಿ ಅವಘಡ ಸೇರಿದಂತೆ ಯಾವುದೇ ತುರ್ತು ಪರಿಸ್ಥಿತಿಗೆ ಪರಿಣಾಮಕಾರಿಯಾಗಿ ಸ್ಪಂದಿಸುವ ಸನ್ನದ್ಧತೆ ರೈಲು ನಿಲ್ದಾಣಗಳಲ್ಲಿ ಇದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವುದು ಈ ಲೆಕ್ಕಪರಿಶೋಧನೆಯ ಉದ್ದೇಶವಾಗಿದೆ.

<><><><>

ಸಿಡ್ನಿಯಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯನ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಮಹಿಳಾ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಪಿ.ವಿ.ಸಿಂಧು ಮತ್ತು ತನ್ವಿ ಶರ್ಮಾ ಪ್ರೀ-ಕ್ವಾರ್ಟರ್ ಫೈನಲ್‌ಗೆ ಪ್ರವೇಶಿಸಿದ್ದಾರೆ. ಮೊದಲ ಸುತ್ತಿನ ಪಂದ್ಯದಲ್ಲಿ ಸಿಂಧು, ಪೆರುವಿನ ವಿಶ್ವದ ೭೯ನೇ ಶ್ರೇಯಾಂಕದ ಆಟಗಾರ್ತಿ ಇನೆಸ್ ಕ್ಯಾಸ್ಟಿಲ್ಲೊ ಅವರನ್ನು ೨೧-೧೩, ೨೧-೧೧ ನೇರ ಸೆಟ್‌ಗಳಿಂದ ಸೋಲಿಸಿದರು. ಮತ್ತೊಂದು ಪಂದ್ಯದಲ್ಲಿ, ತನ್ವಿ ಶರ್ಮಾ, ಚೈನೀಸ್ ತೈಪೆಯ ಚಿಯು ಪಿನ್-ಚಿಯಾನ್ ವಿರುದ್ಧ ೨೧-೧೨, ೨೨-೨೦ ಅಂತರದಲ್ಲಿ ಜಯಗಳಿಸಿದ್ದಾರೆ. ಇಂದು ನಡೆಯಲಿರುವ ಪ್ರೀ-ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಪಿ.ವಿ.ಸಿಂಧು, ಭಾರತದವರೇ ಆದ ಇಶಾರಾಣಿ ಬರುವಾ ಅವರನ್ನು ಎದುರಿಸಲಿದ್ದರೆ. ತನ್ವಿ ಅವರು ಭಾರತದವರೇ ಆದ ಮಾಳವಿಕಾ ಬನ್ಸೋಡ್ ಅವರೊಂದಿಗೆ ಸೆಣಸಲಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>